ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ

2745 (3449) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರವು 1993ರಿಂದ 1997ರವರಗೆ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಹೆಚ್ಚುವರಿಯಾಗಿ ಆಯ್ಕೆ ಮಾಡಿದೆಯೇ; ಹಾಗಿದ್ದಲ್ಲಿ 1998-99ನೇ ಸಾಲಿನಲ್ಲಿ ಏಕೆ ವಿಳಂಬ ಮಾಡುತ್ತಿದೆ;

ಆ) 1998-99ನೇ ಸಾಲಿನಲ್ಲಿ ಸರ್ಕಾರವು ಸುಮಾರು 3000 ಪ್ರಾಥಮಿಕ ಶಾಲಾ ಶಿಕ್ಷಕರನ್ನು ನೇಮಕ ಮಾಡಿದ್ದು, ಅವರ ನೇಮಕಾತಿಯ ಆದೇಶ ಹೊರಡಿಸಿದ್ದು, ಧಾರವಾಡ ಜಿಲ್ಲೆಯ 86 ಹೆಚ್ಚುವರಿ ಶಿಕ್ಷಕ ಅಭ್ಯರ್ಥಿಗಳಿಗೆ ಇಲ್ಲಿಯವರೆಗೆ ನೇಮಕಾತಿಯ ಆದೇಶ ಹೊರಡಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಮಲತಾಯಿಧೋರಣೆಯನ್ನು ನಿವಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ.

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು. 1997-98ನೇ ಸಾಲಿನವರೆಗೂ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ನಿಯಮಗಳನ್ವಯ ಮುಖ್ಯ ಪಟ್ಟಿ ಹಾಗೂ ಹೆಚ್ಚುವರಿ ಪಟ್ಟಿಗಳಲ್ಲಿಆಯ್ಕೆಯಾಗಿದ್ದ ಎಲ್ಲಾ ಅಭ್ಯರ್ಥಿಗಳಿಗೂ ನೇಮಕಾತಿ ಮಾಡಲಾಗಿದೆ.

ನೇಮಕಾತಿಯಲ್ಲಿ ಪ್ರಕಟಿತ ಹುದ್ದೆಗಳನ್ನು ಮೀರದಂತೆ ನೇಮಕಾತಿ ಮಾಡಲು ನ್ಯಾಯಾಲಯಗಳು ಆದೇಶ ನೀಡಿರುವ ಹಿನ್ನೆಲೆಯಲ್ಲಿ 1998-99ನೇ ಸಾಲಿನ ನೇಮಕಾತಿಯಲ್ಲಿ ಮುಖ್ಯ ಪಟ್ಟಿ ಹಾಗೂ ಆ ನಂತರ ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾಗಿದ್ದ ಅಭ್ಯರ್ಥಿಗಳ ನೇಮಕಾತಿಯನ್ನು ಪ್ರಕಟಿಸಿದ ಹುದ್ದೆಗಳಿಗೆ ಸೀಮಿತಗೊಳಿಸಲಾಗಿದೆ.

ಆ) ಧಾರವಾಡ ಜಿಲ್ಲೆಯಲ್ಲಿ 1998-99ನೇ ಸಾಲಿನಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿಮುಖ್ಯ ಪಟ್ಟಿ ಹಾಗೂ ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾಗಿದ್ದ ಅಭ್ಯರ್ಥಿಗಳಲ್ಲಿ ಪ್ರಕಟಿತ ಹುದ್ದೆಗಳಿಗೆ ಸೀಮಿತಗೊಳಿಸಿ ನೇಮಕ ಮಾಡಲಾಗಿದೆ. ಮುಖ್ಯ ಪಟ್ಟಿಯಲ್ಲಿ ಆಯ್ಕೆಯಾಗಿ ಕೆಲಸಕ್ಕೆ ಹಾಜರಾಗದ ಐದು ಅಭ್ಯರ್ಥಿಗಳ ಬದಲಿಗೆ ಐದು ಮಂದಿ ಅಭ್ಯರ್ಥಿಗಳನ್ನು ಹೆಚ್ಚುವರಿ ಪಟ್ಟಿಯಿಂದ ನೇಮಕ ಮಾಡಲಾಗಿದೆ.

ಇ) ಉದ್ಭವಿಸುವುದಿಲ್ಲ.

ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕೊಳವೆ ಬಾವಿಗಳು

2746 (3493) ಶ್ರೀ ವಿ. ಕೃಷ್ಣಪ್ಪ (ದೊಡ್ಡಬಳ್ಳಾಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯಿತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಜಿಲ್ಲಾ ಪಂಚಾಯತ್ ಮತಿಯಿಂದ ಕೊರೆಸಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು?

ಆ) ಈ ಪೈಕಿ ವಿಫಲವಾದ ಕೊಳವೆಬಾವಿಗಳ ಸಂಖ್ಯೆ ಎಷ್ಟು? ಹಾಗೂ ಎಷ್ಟು ಕೊಳವೆಬಾವಿಗಳಿಗೆ ಕೈಪಂಪನ್ನು ಅಳವಡಿಸಲಾಗಿದೆ?

ಇ) ಕೈಪಂಪನ್ನು ಅಳವಡಿಸಲಾಗಿರುವ ಕೊಳವೆ ಬಾವಿಗಳ ವಿಫಲವಾಗಿದ್ದಲ್ಲಿ ಅವುಗಳಿಗೆ ಅಳವಡಿಸಿದ್ದ ಜಿ. ಐ. ಪೆಪು, ಕೇಸಿಂಗ್ ಪೈಪುಗಳನ್ನು ಹರಾಜು ಹಾಕಲಾಗಿದೆಯೇ?

ಈ) ಈ ಹರಾಜಿನಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು) :

ಅ) 1497

ಆ) ಇವುಗಳಲ್ಲಿ 168 ಕೊಳವೆಬಾವಿಗಳು ವಿಫಲವಾಗಿವೆ. 1329 ಕೊಳವೆಬಾವಿಗಳಿಗೆ ಕೈಪಂಪನ್ನು ಅಳವಡಿಸಲಾಗಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಬೈಲಹೊಂಗಲ ತಾಲ್ಲೂಕಿಗೆ ರಾಜೀವಗಾಂಧಿ ಯೋಜನೆಯಲ್ಲಿ ಕುಡಿಯುವ ನೀರಿನ ಯೋಜನೆ.

2747 (3428) ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ (ಬೈಲಹೊಂಗಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯಿತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲಾ ಬೈಲಹೊಂಗಲ ತಾಲ್ಲೂಕಿನ 19 ಗ್ರಾಮಗಳಿಗೆ ಕುಡಿಯುವ ನೀರಿನ ಸಲುವಾಗಿ ರಾಜೀವ್ ಗಾಂಧಿ ಯೋಜನೆಯಲ್ಲಿ ಕೇಂದ್ರ ಸರ್ಕಾರದವರು ಎಂದು ಆಡಳಿತಾತ್ಮಕ ಮಂಜೂರಾತಿ ನೀಡಿದೆ ಮತ್ತು ಎಷ್ಟು ಮೊತ್ತಕ್ಕೆ ನೀಡಿತು ಹಾಗೂ ಈ ಕೆಲಸಕ್ಕೆ ತಾಂತ್ರಿಕ ಮಂಜೂರಾತಿ ಎಂದು ನೀಡಲಾಗಿದೆ.

ಆ) ಈ ಯೋಜನೆಯಿಂದ ಯಾವ ಯಾವ ಹಳ್ಳಿಗಳಿಗೆ ಪ್ರಯೋಜನ ಆಗುವುದು (ಹಳ್ಳಿಗಳ ಹೆಸರು ಕೊಡಿ)

ಇ) ಈ ಯೋಜನೆಗೆ ತಗಲುವ ವೆಚ್ಚ ಎಷ್ಟು; ಇದರಲ್ಲಿ ಸರ್ಕಾರ ಎಷ್ಟು ಹಣ ಭರಿಸ ಬೇಕಾಗುವುದುಹಾಗೂ ಎಷ್ಟು ಹಣ ಕೇಂದ್ರ ಸರ್ಕಾರ ಭರಿಸುವುದು;

ಈ) ಕೇಂದ್ರ ಸರ್ಕಾರ ಈ ಯೋಜನೆಗೆ ಎಷ್ಟು ಹಣ ಈಗಾಗಲೇ ಬಿಡುಗಡೆ ಮಾಡಿದೆ ಲಕ್ಷಗಳು ಬಿಡುಗಡೆಯಾಗಿದೆ.

ಉ) ಈ ಕೆಲಸಕ್ಕೆ ಕೇಂದ್ರ ಸರ್ಕಾರವದರು ಆಡಳಿತಾತ್ಮಕ ಮಂಜೂರಾತಿ ನೀಡಿರುವುದರಿಂದ ಹಾಗೂ ಹಣ ಬಿಡುಗಡೆ ಮಾಡಿರುವುದರಿಂದ ಇನ್ನೂವರೆಗೂ ಈ ಕೆಲಸ ಪ್ರಾರಂಭವಾಗಿಲ್ಲ ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ ಈ ಯೋಜನೆಯ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು;